ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಪ್ರಾಥಮಿಕ ಶಿಕ್ಷಣ ಇಲಾಖೆಯಡಿ ಬರುವ ಗ್ರಂಥಾಲಯ ಬಗ್ಗೆ

ಶ್ರೀ ಜಿ. ರಘು ಆಚಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

100 (99) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಪ್ರಾಥಮಿಕ ಶಿಕ್ಷಣ ಇಲಾಖೆಯಡಿ ಬರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಅಂಕಿ ಅಂಶ ಒದಗಿಸುವುದು) ಅವುಗಳಿಗೆ ಸಮರ್ಪಕವಾಗಿ ಪುಸ್ತಕಗಳನ್ನು ಒದಗಿಸಲಾಗುತ್ತಿದೆಯೇ; (ಮಾಹಿತಿ ಒದಗಿಸುವುದು)

(ಆ) ಕಳೆದ 3 ವರ್ಷಗಳಲ್ಲಿ ಶಿಕ್ಷಣ ಇಲಾಖೆಯ ಗ್ರಂಥಾಲಯಗಳಿಗೆ ಪುಸ್ತಕ ಖರೀದಿ ಮಾಡಲು ಬಳಸಲಾದ ಅನುದಾನ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಪ್ರಾಥಮಿಕ ಶಿಕ್ಷಣ ಇಲಾಖೆಯಡಿ ಬರುವ ಗ್ರಂಥಾಲಯಗಳಿಗೆ 2020-2021ನೇ ಸಾಲಿಗೆ ಪುಸ್ತಕ ಖರೀದಿಸಲು ಮೀಸಲಿಡಲಾದ ಅನುದಾನ ಎಷ್ಟು? (ಮಾಹಿತಿ ಒದಗಿಸುವುದು)